ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.
ಸಂಖ್ಯೆ : ವಾಇ : ಜ ನಿ : ಸುಮಪ : 2020–21 ದಿನಾಂಕ : 06–08–2020

## ಪತ್ರಿಕಾ ಪ್ರಕಟಣೆ

## ಸೆಪ್ಟೆಂಬರ್ 23 ರೊಳಗೆ ರಾಜ್ಯ ವಿಧಾನಸಭಾ ಅಧಿವೇಶನ : ಸಭಾಧ್ಯಕ್ಷರಿಂದ ಸದನದಲ್ಲಿನ ವ್ಯವಸ್ಥೆಗಳ ಪರಿಶೀಲನೆ

**ಬೆಂಗಳೂರು, ಆಗಸ್ಟ್ 6 (ಕರ್ನಾಟಕ ವಾರ್ತೆ) :**

ಕಳೆದ ಮಾರ್ಚ್‌ನಲ್ಲಿ ರಾಜ್ಯ ವಿಧಾನ ಸಭಾ ಅಧಿವೇಶನವು ನಡೆದಿದ್ದು, ಸಂವಿಧಾನಬದ್ದವಾಗಿ ಆರು ತಿಂಗಳ ಒಳಗೆ ಅಂದರೆ ಸೆಪ್ಟೆಂಬರ್ 23 ರೊಳಗೆ, ಮತ್ತೊಮ್ಮೆ ಸಮಾವೇಶಗೊಳ್ಳಬೇಕಿರುವ ಹಿನ್ನೆಲೆಯಲ್ಲಿ ಸದನದಲ್ಲಿ ರಾಜ್ಯ ಸಚಿವ ಸಂಪುಟದ ಸದಸ್ಯರು ಮತ್ತು ಸದನದ ಸದಸ್ಯರು, ಸದನದಲ್ಲಿ ಹಾಜರಿರುವ ಅಧಿಕಾರಿಗಳು ಹಾಗೂ ಮಾಧ್ಯಮದವರ ಆರೋಗ್ಯಕ್ಕೆ ಕೋವಿಡ್–19 ರ ಸೋಂಕು ತಗುಲದಂತೆ ಕ್ರಮ ವಹಿಸುವುದು ಹೇಗೆ ? ಎಂಬುದರ ಕುರಿತು ರಾಜ್ಯ ವಿಧಾನ ಸಭೆಯ ಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿ ಅವರು ಇಲ್ಲಿ ಇಂದು ಸದನದಲ್ಲಿನ ವ್ಯವಸ್ಥೆಗಳನ್ನು ಖುದ್ದು ಪರಿಶೀಲಿಸಿ ಅಧಿಕಾರಿಗಳೊಂದಿಗೆ ಮಾತುಕತೆ ನಡೆಸಿದರು.

ಕೋವಿಡ್–19 ರ ಉಪಟಳ ಎಲ್ಲೆಡೆ ವ್ಯಾಪಿಸುತ್ತಿರುವ ಹಿನ್ನೆಲೆಯಲ್ಲಿ ರಾಜ್ಯ ವಿಧಾನ ಸಭಾ ಅಧಿವೇಶನವನ್ನು ನಡೆಸುವುದು ಹೇಗೆ? ಎಂಬ ಬಗ್ಗೆ ವಿವಿಧ ಸ್ತರಗಳಲ್ಲಿ ವಿಸ್ತೃತ ಚರ್ಚೆಗಳು ನಡೆಯುತ್ತಿವೆ. ರಾಜ್ಯದ ರಾಜಧಾನಿಯ ವಿಧಾನ ಸೌಧ ಹೊರತುಪಡಿಸಿ ಬೇರೆಲ್ಲಾದರೂ ಅಧಿವೇಶನ ನಡೆಸಲು ಸೂಕ್ತ ಸ್ಥಳ ಇದೆಯೇ? ಎಂಬ ಬಗ್ಗೆಯೂ ಅಧಿಕಾರಿಗಳು ಪರಿಶೀಲಿಸುತ್ತಿದ್ದಾರೆ.

ವಿಧಾನ ಸೌಧದ ಮೊದಲನೇಯ ಮಹಡಿಯಲ್ಲಿರುವ ವಿಧಾನ ಸಭಾ ಸಭಾಂಗಣದಲ್ಲಿ ಪ್ರಸ್ತುತ ಇರುವ ಆಸನ ವ್ಯವಸ್ಥೆಗಳ ನಡುವೆ ಸಾಮಾಜಿಕ ಅಂತರ ಕಾಯ್ದುಕೊಳ್ಳಲು ಗಾಜಿನ ಕವಚಗಳನ್ನು ಅಳವಡಿಸಿದರೆ ಹೇಗೆ? ಸದನಕ್ಕೆ ಆಗಮಿಸುವ ಮುಖ್ಯಮಂತ್ರಿಗಳೂ ಒಳಗೊಂಡಂತೆ ಅವರ ಸಂಪುಟದ ಎಲ್ಲಾ ಸದಸ್ಯರು, ಪ್ರತಿಪಕ್ಷ ನಾಯಕರೂ, ಸದನದ ಎಲ್ಲಾ ಸದಸ್ಯರಿಗೆ ಅಧಿವೇಶನವು ನಡೆಯುವ ದಿನಗಳಂದು ಕಡ್ಡಾಯವಾಗಿ ಮುಖಗವಸು ಒದಗಿಸುವುದು ಹಾಗೂ ಮುಖ ರಕ್ಷಕಗಳನ್ನು ಧರಿಸಿಬರಬೇಕೆಂದು ವಿನಂತಿಸುವುದರ ಬಗ್ಗೆ ಅಧಿಕಾರಿಗಳು ತಮಗೆ ಸಲಹೆ ನೀಡಿದ್ದಾರೆ ಎಂದು ವಿಶ್ವೇಶ್ವರ ಹೆಗಡೆ ಕಾಗೇರಿ ಅವರು ಪರಿಶೀಲನೆ ನಂತರ ಮಾಧ್ಯಮದವರಿಗೆ ಮಾಹಿತಿ ನೀಡಿದರು.

ಲೋಕಸಭೆ ಮತ್ತು ರಾಜ್ಯ ಸಭೆ ಹಾಗೂ ಇತರೆ ರಾಜ್ಯಗಳಲ್ಲಿನ ವಿಧಾನ ಸಭೆ ಮತ್ತು ವಿಧಾನ ಪರಿಷತ್ತು ಸಮಾವೇಶಗೊಳ್ಳಲು ಹೇಗೆ ಸಿದ್ದತೆಗಳನ್ನು ನಡೆಸುತ್ತಿವೆ? ಎಂಬುದರ ಬಗ್ಗೆಯೂ ಮಾಹಿತಿ ಕಲೆ ಹಾಕಲು ಅಧಿಕಾರಿಗಳಿಗೆ ಸೂಚನೆ ನೀಡಿರುವುದಾಗಿ ಅವರು ಹೇಳಿದರು.

ಮುಂದಿನ ವಾರ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು ಹಾಗೂ ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿ ಹಾಗೂ ಇನ್ನಿತರ ಹಿರಿಯ ಅಧಿಕಾರಿಗಳ ಜೊತೆಗೆ ಸಮಾಲೋಚನೆ ನಡೆಸಿ ಸ್ಥಳ ನಿಷ್ಕರ್ಷೆ ಮಾಡುವುದಾಗಿಯೂ ಸಭಾಧ್ಯಕ್ಷರು ತಿಳಿಸಿದರು.

## ರಾಜ್ಯದ ಪ್ರವಾಹ ಪರಿಸ್ಥಿತಿ ಎದುರಿಸಲು ಸೂಕ್ತ ಕ್ರಮಕೈಗೊಳ್ಳಲಾಗಿದೆ

– ಕಂದಾಯ ಸಚಿವ ಆರ್.ಅಶೋಕ್

**ಬೆಂಗಳೂರು, ಆಗಸ್ಟ್ 6 (ಕರ್ನಾಟಕ ವಾರ್ತೆ) :**

ರಾಜ್ಯದ ಕೆಲವು ಜಿಲ್ಲೆಗಳಲ್ಲಿ ಪ್ರವಾಹ ಉಂಟಾಗಿದ್ದು, ಪ್ರವಾಹ ತೀವ್ರವಾಗುವ ಮುನ್ನ ಪರಿಸ್ಥಿತಿಯನ್ನು ನಿಭಾಯಿಸಲು ಮುಂಜಾಗ್ರತಾ ಕ್ರಮ ಕೈಗೊಳ್ಳಲಾಗಿದೆ ಎಂದು ಕಂದಾಯ ಸಚಿವ ಆರ್. ಅಶೋಕ್ ತಿಳಿಸಿದರು.

ಅವರು ಇಂದು ವಿಧಾನಸೌಧದಲ್ಲಿ ಹಿರಿಯ ಅಧಿಕಾರಿಗಳೊಂದಿಗೆ ಪ್ರವಾಹ ಪರಿಸ್ಥಿತಿಯನ್ನು ನಿಭಾಯಿಸಲು ಕೈಗೊಂಡಿರುವ ಕ್ರಮಗಳ ಕುರಿತು ಹಮ್ಮಿಕೊಂಡಿದ್ದ ಸಭೆಯ ನಂತರ ಪತ್ರಿಕಾ ಗೋಷ್ಠಿಯಲ್ಲಿ ಮಾತನಾಡಿದರು.

ಮುಖ್ಯಮಂತ್ರಿಗಳ ನಿರ್ದೇಶನದಂತೆ ಮುಂಜಾಗ್ರತಾ ಕ್ರಮಗಳನ್ನು ಕೈಗೊಂಡಿದ್ದು, ಪ್ರವಾಹದಿಂದಾಗಿ ಸಂಕಷ್ಟಕ್ಕೆ ಸಿಲಿಕಿರುವ ಜನರ ರಕ್ಷಣೆಗಾಗಿ ಈ ಬಾರಿ ಜಿಲ್ಲಾಧಿಕಾರಿಗಳ ಜೊತೆಯಲ್ಲಿ ಪೊಲೀಸ್ ಇಲಾಖೆಯು ಕೆಲಸ ನಿರ್ವಹಿಸಲಿದೆ ಎಂದರು.

ರಾಜ್ಯದಲ್ಲಿ ಕಳೆದ ವಾರದಿಂದ ಉಂಟಾಗಿರುವ ಪ್ರವಾಹ ಪರಿಸ್ಥಿತಿಯನ್ನು ನಿಭಾಯಿಸಲು ಕೈಗೊಂಡಿರುವ ಕ್ರಮಗಳ ಬಗ್ಗೆ 19 ಜಿಲ್ಲೆಗಳ ಜಿಲ್ಲಾಧಿಕಾರಿಗಳೊಂದಿಗೆ ವಿಡಿಯೋ ಕಾನ್ಫರೆನ್ಸ್ ಮೂಲಕ ಸಭೆ ನಡೆಸಲಾಗಿದೆ. ಕಳೆದ ಸಾಲಿನಲ್ಲಿ ಸಹ ಇದೇ ತಿಂಗಳಿನಲ್ಲಿ ಇಂತಹ ಪರಿಸ್ಥಿತಿ ಉಂಟಾಗಿತ್ತು, ಪ್ರಸ್ತುತ ಪರಿಸ್ಥಿತಿ ಕುರಿತು ಮುಂದಾಗಬಹುದಾದ ಪ್ರವಾಹ ಪರಿಸ್ಥಿತಿ ಎದುರಿಸಲು ಕಳೆದ ಏಪ್ರಿಲ್‌ನಿಂದ ವಿವಿಧ ಪೂರ್ವಭಾವಿ ಸಿದ್ಧತೆ ಸಭೆಗಳನ್ನು ಹಮ್ಮಿಕೊಳ್ಳಲಾಗಿತ್ತು, ರಾಜ್ಯದ ಮಳೆ ಪರಿಸ್ಥಿತಿ, ಮಳೆ ಮುನ್ಸೂಚನೆ ಮತ್ತು ಜಲಾಶಯಗಳ ನೀರಿನ ಮಟ್ಟದ ಬಗ್ಗೆ ಸಂಬಂಧಿಸಿದ ಅಧಿಕಾರಿಗಳೊಂದಿಗೆ ನಿರಂತರವಾಗಿ ಚರ್ಚಿಸಲಾಗುತ್ತಿದೆ.

ರಾಜ್ಯದ ಮಲೆನಾಡು ಮತ್ತು ಕರಾವಳಿ ಜಿಲ್ಲೆಗಳಾದ ಉಡುಪಿ, ಉತ್ತರ ಕನ್ನಡ, ದಕ್ಷಿಣ ಕನ್ನಡ, ಕೊಡಗು, ಶಿವಮೊಗ್ಗ, ಚಿಕ್ಕಮಗಳೂರು ಹಾಗೂ ಹಾಸನ ಜಿಲ್ಲೆಗಳ ಜಿಲ್ಲಾದಿಕಾರಿಗಳಿಗೆ ಇಂದಿನಿಂದ ರೆಡ್ ಅಲರ್ಟ್ ಸೂಚನೆ ನೀಡಲಾಗಿದೆ.

ಕಾವೇರಿ ತೀರದಲ್ಲಿ ಹೆಚ್ಚಿನ ಮಳೆ ಬೀಳುವ ಸಾಧ್ಯತೆ ಇದ್ದು, ಜಲಾಶಯಗಳ ಒಳಹರಿವು ಹೆಚ್ಚಲಿದೆ. ಇಂದು ಮಧ್ಯಾಹ್ನದಿಂದ ನಾನು 11 ಜಿಲ್ಲೆಗಳ ಜಿಲ್ಲಾದಿಕಾರಿಗಳೊಂದಿಗೆ ದೂರವಾಣಿ ಮೂಲಕ ಮಾತನಾಡಿ ಪರಿಸ್ಥಿತಿ ಮಾಹಿತಿ ಪಡೆದು ಮುನ್ನೆಚ್ಚರಿಕೆ ವಹಿಸಲು ಸೂಚನೆ ನೀಡಲಾಗಿದೆ.

ಚಿಕ್ಕಮಗಳೂರು ಜಿಲ್ಲೆಯ ಶೃಂಗೇರಿ, ಮೂಡಿಗೆರೆ ಭಾಗದಲ್ಲಿ ಕೆಲವು ಮನೆಗಳು ಹಾಳಾಗಿದ್ದು, ಕೂಡಲೇ ರೂ.10,000/- ಪರಿಹಾರ ಪಾವತಿಸಲು ಸೂಚಿಸಿದ್ದೇನೆ. ಉಡುಪಿ ಜಿಲ್ಲೆಯ ಬೈಂದೂರು ಭಾಗದಲ್ಲಿ 150 ಮಿ.ಮೀ ವರೆಗೆ ಮಳೆ, ಮರಗಳು ಉರುಳಿದ್ದು ತೆರವುಗಳಿಸಲಾಗುತ್ತಿದೆ.

ಉತ್ತರ ಕನ್ನಡ ಜಿಲ್ಲೆಯಲ್ಲಿ ಹಲವು ಮರಗಳು ಉರುಳಿದ್ದು, ಶಿವಮೊಗ್ಗದ ಕೆಲವು ಭಾಗದಲ್ಲಿ ಹೆಚ್ಚುಮಳೆಯಾಗಿದೆ. ಹಾಸನದಲ್ಲಿ ಯಾವುದೇ ಹಾನಿ ವರದಿಯಾಗಿಲ್ಲ. ಉಳಿದ ಜಿಲ್ಲೆಗಳಲ್ಲಿ ಮರಗಳು ಉರುಳಿದ್ದು ಯಾವುದೇ ಹಾನಿಯಾದ ಬಗ್ಗೆ ವರದಿಯಾಗಿಲ್ಲ.

ಜುಲೈ 25 ರಂದು ನಡೆದ ವಿಡಿಯೋ ಕಾನ್ಫರೆನ್ಸ್ ಸಭೆಯಲ್ಲಿ ತುರ್ತು ಪರಿಸ್ಥಿತಿಯನ್ನು ಎದುರಿಸಲು ಅಗತ್ಯವಿರುವ ಯಂತ್ರೋಪಕರಣಗಳನ್ನು ಖರೀಧಿಸಲು ಸಹ ಅನುಮತಿ ನೀಡಲಾಗಿದೆ. ಗ್ರಾಮಾಪಂಚಾಯತಿ ಮಟ್ಟದ ಯೋಜನೆ ರೂಪಿಸಲಾಗಿದೆ. ಎಲ್ಲಾ ಜಿಲ್ಲೆಗಳಲ್ಲಿ ಅಗತ್ಯ ಅನುದಾನ ಬಿಡುಗಡೆ ಮಾಡಲಾಗಿದೆ.

ಮುಂದಿನ ಮೂರು ದಿನಗಳ ಮಳೆ ಮುನ್ಸೂಚನೆ:

1. ಕರಾವಳಿ ಭಾಗ: ಉತ್ತರ ಕನ್ನಡ, ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಗಳ ಹಲವು ಪ್ರದೇಶಗಳಲ್ಲಿ ಬಾರಿ ಮಳೆಯಾಗುವುದು ಮುನ್ಸೂಚನೆ ಇದೆ.
2. ಮಲೆನಾಡು ಭಾಗ: ಶಿವಮೊಗ್ಗ, ಕೊಡಗು, ಹಾಸನ ಮತ್ತು ಚಿಕ್ಕಮಗಳೂರು ಜಿಲ್ಲೆಗಳಲ್ಲಿ ಹೆಚ್ಚಿನ ಮಳೆ
3. ಉತ್ತರ ಒಳನಾಡು: ಬೆಳಗಾವಿ, ಧಾರವಾಡ, ಹಾವೇರಿ, ಬೀದರ್ ಹಾಗೂ ಕಲಬುರಗಿಯಲ್ಲಿ ಮಧ್ಯಮ ಮಳೆ
4. ದಕ್ಷಿಣ ಒಳನಾಡು: ದಾವಣಗೆರೆ, ಮೈಸೂರು, ಚಾಮರಾಜನಗರ ಮತ್ತು ಇತರೆ ಜಿಲ್ಲೆಗಳಲ್ಲಿ ಸಾಧಾರಣ ಮಳೆಯಾಗುವ ಸಾಧ್ಯತೆ ಇದೆ.

ರಾಜ್ಯದ ಜಲಾಶಯಗಳು ಹಾಗೂ ಮಳೆಹಾನಿ ಕುರಿತು ವಿವಿಧ ತಂಡಗಳನ್ನು ರಚಿಸಲಾಗಿದ್ದು, ಅಂತರ ರಾಜ್ಯ ತಂಡವು ಮಹಾರಾಷ್ಟ್ರ ಜಲಾಶಯಗಳ ಹೊರಹರಿವಿನ ಬಗ್ಗೆ ಅಧ್ಯಯನ ನಡೆಸಲಿವೆ. ಎನ್‌ಡಿಆರ್‌ಎಫ್ ತಂಡವು ಕೊಡಗು, ಧಾರವಾಡ, ಬೆಳಗಾವಿ ಹಾಗೂ ದಕ್ಷಿಣ ಕನ್ನಡ ಜಿಲ್ಲೆಗಳಿಗೆ ಬೇಟಿ ನೀಡುವುದು. ಎಸ್‌ಡಿಆರ್‌ಎಫ್ ತಂಡವು ಸಹ ಸಕ್ರೀಯವಾಗಿ ತೊಡಗಿಸಿಕೊಂಡಿದೆ ಎಂದು ಸಚಿವರು ಹೇಳಿದರು.

## ಕರೋನದಿಂದ ಸೋಂಕಿನಿಂದ ಗುಣಮುಖ: ಕರ್ತವ್ಯಕ್ಕೆ ಹಾಜರು

**ಬೆಂಗಳೂರು, ಆಗಸ್ಟ್ 6 (ಕರ್ನಾಟಕ ವಾರ್ತೆ) :**

ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ಉಪಕಾರ್ಯದರ್ಶಿಯವರಾದ ಶ್ರೀ ಜಯಪ್ರಕಾಶ್ ಎ., ಹಿರಿಯ ಸಿವಿಲ್ ನ್ಯಾಯಾಧೀಶರು ಇವರು ಕರೋನಾ ಸೊಂಕಿನಿಂದ ಗುಣಮುಖರಾಗಿ ಕರ್ತವ್ಯಕ್ಕೆ ಮರಳಿದವರನ್ನು, ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯದ ಹಿರಿಯ ನ್ಯಾಯಮೂರ್ತಿ ಹಾಗೂ ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ಕಾರ್ಯನಿರ್ವಾಹಕ ಅಧ್ಯಕ್ಷರವರುಗಳಾದ ಶ್ರೀ ಅರವಿಂದ ಕುಮಾರ್ ರವರು ಗುಲಾಬಿ ಹೂ ನೀಡಿ ಸ್ವಾಗತಿಸಿ ಕರ್ತವ್ಯಕ್ಕೆ ಬರಮಾಡಿಕೊಂಡರು.

ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ಕೇಂದ್ರ ಕಛೇರಿಯಲ್ಲಿ ಉಪ ಕಾರ್ಯದರ್ಶಿಯಾಗಿ ಕಾರ್ಯನಿರ್ವಹಿಸುತ್ತಿರುವ ಶ್ರೀ ಜಯಪ್ರಕಾಶ್ ಎ, ಹಿರಿಯ ಸಿವಿಲ್ ನ್ಯಾಯಾಧೀಶರವರಿಗೆ ಕಳೆದ ತಿಂಗಳು ಕೋರೋನಾ ಸೊಂಕು ತಗುಲಿತ್ತು. ಈ ಹಿನ್ನಲೆಯಲ್ಲಿ ಚಿಕಿತ್ಸೆಗೆ ತೆರಳಿದ್ದ ಅವರು **8** ದಿನಗಳ ಕಾಲ ಚಿಕಿತ್ಸೆ ಪಡೆದು ಗುಣಮುಖರಾದರು, ನಂತರ **14** ದಿನಗಳ ಕಾಲಹೋಂ ಕ್ವಾರೆಂಟೆನ್ ನಲ್ಲಿದ್ದು ಚಿಕಿತ್ಸೆ ಮತ್ತು ಹಾರೈಕೆ ಬಳಿಕ ಸಂಪೂರ್ಣ ಗುಣಮುಖರಾದ ಶ್ರೀ ಜಯಪ್ರಕಾಶ್ ಎ. ರವರು ದಿನಾಂಕ **05.08.2020** ರಂದು ಕರ್ತವ್ಯಕ್ಕೆ ಹಾಜರಾದರು, ಇದೇ ಸಂದರ್ಭದಲ್ಲಿ ಅವರಿಗೆ ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಯವರಾದ ಶ್ರೀ ಹೆಚ್. ಶಶೀಧರ ಶೆಟ್ಟಿ,, ರವರು ಹೂ ನೀಡಿ ಸ್ವಾಗತಿಸಿದರು ಹಾಗೂ ಇನ್ನಿತರ ಕಛೇರಿ ಸಿಬ್ಬಂದಿ ವರ್ಗದವರು ಸದರಿಯವರಿಗೆ ಸ್ವಾಗತ ಕೋರಿ ಶುಭಾಶಯಗಳನ್ನು ಕೋರಿದರು.

## ವಸತಿ ಸಚಿವರ ಪ್ರವಾಸ

**ಬೆಂಗಳೂರು, ಆಗಸ್ಟ್ 6 (ಕರ್ನಾಟಕ ವಾರ್ತೆ) :**

**ವಸತಿ ಸಚಿವ ವಿ. ಸೋಮಣ್ಣ ಅವರು ಆಗಸ್ಟ್ 7 ರವರೆಗೆ ಕೊಡಗು ಜಿಲ್ಲೆಯಲ್ಲಿ ಪ್ರವಾಸ ಕೈಗೊಳ್ಳುವರು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.**

## ಎಸಿಬಿ ದಾಳಿ

ಬೆಂಗಳೂರು, ಆಗಸ್ಟ್ 6 (ಕರ್ನಾಟಕ ವಾರ್ತೆ) :

ಬೆಳಗಾವಿ ಜಿಲ್ಲೆ, ಚಿಕ್ಕೋಡಿ ತಾಲ್ಲೂಕು, ಸದಲಗಾ ಗ್ರಾಮದ ನಿವಾಸಿಯೊಬ್ಬರು ತಮ್ಮ ತಂದೆ ಹೆಸರಿನಲ್ಲಿ ಈ ಹಿಂದೆ ಆಶ್ರಯ ಯೋಜನೆಯಡಿಯಲ್ಲಿ ಮಂಜೂರಾದ ಮನೆಯ ಮೇಲೆ ಇರುವ ಬೋಜಾ ಕಡಿಮೆ ಮಾಡಿ ಪಿರ್ಯಾದಿಯ ತಂದೆಯ ಹೆಸರನ್ನು ದಾಖಲು ಮಾಡಿ ಹೊಸ ಉತಾರ ಪೂರೈಸಲು ಆಪಾದಿತ ಸರ್ಕಾರಿ ನೌಕರನಾದ ಶ್ರೀ. ಅಶೋಕ. ನೇಮಾ. ಹೆಗಡೆ, ಬಿಲ್ ಕಲೆಕ್ಟರ್, ಪುರಸಭೆ ಕಾರ್ಯಾಲಯ, ಸದಲಗಾ, ಚಿಕ್ಕೋಡಿ ತಾಲ್ಲೂಕು ಇವರು ರೂ.15000/- ಲಂಚ ಹಣ ನೀಡುವಂತೆ ಹೇಳಿ ಅಂತಿಮವಾಗಿ ರೂ. 9000/- ಲಂಚದ ಹಣಕ್ಕೆ ಬೇಡಿಕೆ ಇಟ್ಟಿರುತ್ತಾರೆ.

ಈ ಬಗ್ಗೆ ಆಪಾದಿತ ಸರ್ಕಾರಿ ನೌಕರನಾದ ಶ್ರೀ. ಅಶೋಕ. ನೇಮಾ. ಹೆಗಡೆ, ಬಿಲ್ ಕಲೆಕ್ಟರ್, ಪುರಸಭೆ ಕಾರ್ಯಾಲಯ, ಸದಲಗಾ, ಚಿಕ್ಕೋಡಿ ತಾಲ್ಲೂಕು ರವರು ಲಂಚದ ಹಣದ ಬೇಡಿಕೆ ಇಟ್ಟ ಬಗ್ಗೆ ಖಚಿತಪಡಿಸಿಕೊಂಡು, ಲಂಚದ ಹಣವನ್ನು ನೀಡಲು ಇಷ್ಟವಿಲ್ಲದ ಕಾರಣ ಫಿರ್ಯಾದುದಾರರು ಭ್ರಷ್ಟಾಚಾರ ನಿಗ್ರಹ ದಳ, ಬೆಳಗಾವಿ ಜಿಲ್ಲಾ ಠಾಣೆಗೆ ನೀಡಿದ ದೂರಿನ ಮೇರೆಗೆ ಪ್ರಕರಣ ದಾಖಲಿಸಿಕೊಂಡು ತನಿಖೆಯನ್ನು ಕೈಗೊಳ್ಳಲಾಗಿರುತ್ತದೆ.

ಈ ದೂರಿನನ್ವಯ ದಿನಾಂಕ: 06.08.2020 ರಂದು ನಡೆಸಿದ ಟ್ರ್ಯಾಪ್ ಕಾರ್ಯಾಚರಣೆಯಲ್ಲಿ ಶ್ರೀ. ಅಶೋಕ. ನೇಮಾ. ಹೆಗಡೆ, ಬಿಲ್ ಕಲೆಕ್ಟರ್, ಪುರಸಭೆ ಕಾರ್ಯಾಲಯ, ಸದಲಗಾ, ಚಿಕ್ಕೋಡಿ ತಾಲ್ಲೂಕು ರವರು ರೂ. 9,000/- ಲಂಚದ ಹಣವನ್ನು ಫಿರ್ಯಾದುದಾರರಿಂದ ಪಡೆದುಕೊಂಡಿದ್ದು, ಬೆಳಗಾವಿ ಜಿಲ್ಲಾ ಭ್ರಷ್ಟಾಚಾರ ನಿಗ್ರಹ ದಳದ ಅಧಿಕಾರಿಗಳು ನಡೆಸಿದ ಕಾರ್ಯಾಚರಣೆಯಲ್ಲಿ ಸಿಕ್ಕಿಬಿದ್ದಿದ್ದು, ಲಂಚದ ಹಣದ ಸಮೇತ ಆರೋಪಿತನನ್ನು ವಶಕ್ಕೆ ಪಡೆದು, ದಸ್ತಗಿರಿ ಮಾಡಿ, ಲಂಚದ ಹಣವನ್ನು ವಶಪಡಿಸಿಕೊಂಡು ದಿನಾಂಕ: 06.08.2020 ರಂದು ಮಾನ್ಯ ನ್ಯಾಯಾಲಯದ ಮುಂದೆ ಹಾಜರುಪಡಿಸಲಾಗಿದ್ದು, ಪ್ರಕರಣದ ತನಿಖೆ ಮುಂದುವರೆದಿದೆ.

ಬೆಂಗಳೂರು ಗ್ರಾಮಾಂತರ ಜಿಲ್ಲೆ, ಆನೇಕಲ್ ತಾಲ್ಲೂಕು, ಸಿಂಗಸಂದ್ರ ಗ್ರಾಮದ ನಿವಾಸಿಯೊಬ್ಬರು ಚಂದಾಪುರ ಪುರಸಭೆ ವ್ಯಾಪ್ತಿಯಲ್ಲಿರುವ ಬೋರ್‌ವೆಲ್ ರಿಪೇರಿಗೆ ಸಂಬಂದಿಸಿದಂತೆ ಒಂದು ವರ್ಷದ ಕಾಂಟ್ರಾಕ್ಟ್ ಪಡೆದುಕೊಂಡು ಕಾಮಗಾರಿಗಳನ್ನು ನಡೆಸಿರುತ್ತಾರೆ. ಇವರ ಕಾಮಗಾರಿಗೆ ಸಂಬಂದಿಸಿದಂತೆ ರೂ. 30,00,000/- ಹಣ ಚಂದಾಪುರ ಪುರಸಭೆಯಿಂದ ಬಿಡುಗಡೆಯಾಗಬೇಕಾಗಿದ್ದು, ಈ ಹಣವನ್ನು

ಬಿಡುಗಡೆ ಮಾಡಲು ಶ್ರೀ. ಎಸ್. ಎ. ರಾಮ್‌ಪ್ರಕಾಶ್, ಮುಖ್ಯಾಧಿಕಾರಿ, ಚಂದಾಪುರ ಪುರಸಭೆ, ಆನೇಕಲ್ ತಾಲ್ಲೂಕು ರವರು ರೂ. ೩,೦೦,೦೦೦/- ಲಂಚದ ಹಣಕ್ಕೆ ಬೇಡಿಕೆ ಇಟ್ಟಿರುತ್ತಾರೆ.

ಈ ಬಗ್ಗೆ ಆಪಾದಿತ ಸರ್ಕಾರಿ ನೌಕರನಾದ ಶ್ರೀ. ಎಸ್. ಎ. ರಾಮ್‌ಪ್ರಕಾಶ್, ಮುಖ್ಯಾಧಿಕಾರಿ, ಚಂದಾಪುರ ಪುರಸಭೆ, ಆನೇಕಲ್ ತಾಲ್ಲೂಕು ರವರು ಲಂಚದ ಹಣದ ಬೇಡಿಕೆ ಇಟ್ಟ ಬಗ್ಗೆ ಖಚಿತಪಡಿಸಿಕೊಂಡು, ಲಂಚದ ಹಣವನ್ನು ನೀಡಲು ಇಷ್ಟವಿಲ್ಲದ ಕಾರಣ ಫಿರ್ಯಾದುದಾರರು ಭ್ರಷ್ಟಾಚಾರ ನಿಗ್ರಹ ದಳ, ಬೆಂಗಳೂರು ಗ್ರಾಮಾಂತರ ಜಿಲ್ಲಾ ಠಾಣೆಗೆ ನೀಡಿದ ದೂರಿನ ಮೇರೆಗೆ ಪ್ರಕರಣ ದಾಖಲಿಸಿಕೊಂಡು ತನಿಖೆಯನ್ನು ಕೈಗೊಳ್ಳಲಾಗಿರುತ್ತದೆ.

ಈ ದೂರಿನನ್ವಯ ದಿನಾಂಕ: ೦೫.೦೮.೨೦೨೦ ರಂದು ನಡೆಸಿದ ಟ್ರ್ಯಾಪ್ ಕಾರ್ಯಾಚರಣೆಯಲ್ಲಿ ಶ್ರೀ. ಎಸ್. ಎ. ರಾಮ್‌ಪ್ರಕಾಶ್, ಮುಖ್ಯಾಧಿಕಾರಿ, ಚಂದಾಪುರ ಪುರಸಭೆ, ಆನೇಕಲ್ ತಾಲ್ಲೂಕು ರವರು ರೂ. ೨,೫೦,೦೦೦/- ಲಂಚದ ಹಣವನ್ನು ಫಿರ್ಯಾದುದಾರರಿಂದ ಪಡೆದುಕೊಂಡಿದ್ದು, ಬೆಂಗಳೂರು ಗ್ರಾಮಾಂತರ ಜಿಲ್ಲಾ ಭ್ರಷ್ಟಾಚಾರ ನಿಗ್ರಹ ದಳದ ಅಧಿಕಾರಿಗಳು ನಡೆಸಿದ ಕಾರ್ಯಾಚರಣೆಯಲ್ಲಿ ಸಿಕ್ಕಿಬಿದ್ದಿದ್ದು, ಲಂಚದ ಹಣದ ಸಮೇತ ಆರೋಪಿತನನ್ನು ವಶಕ್ಕೆ ಪಡೆದು, ದಸ್ತಗಿರಿ ಮಾಡಿ, ಲಂಚದ ಹಣವನ್ನು ವಶಪಡಿಸಿಕೊಂಡು ದಿನಾಂಕ: ೦೫.೦೮.೨೦೨೦ ರಂದು ಮಾನ್ಯ ನ್ಯಾಯಾಲಯದ ಮುಂದೆ ಹಾಜರುಪಡಿಸಲಾಗಿದ್ದು, ಪ್ರಕರಣದ ತನಿಖೆ ಮುಂದುವರೆದಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

**ಗ್ರಾಮೀಣಾಭಿವೃದ್ದಿ ಮತ್ತು ಪಂಚಾಯತ್‌ರಾಜ್ ಇಲಾಖೆ ಆಡಿಟ್ ವರದಿ ಸಭಾಧ್ಯಕ್ಷರಿಗೆ ಸಲ್ಲಿಕೆ**

**ಬೆಂಗಳೂರು, ಆಗಸ್ಟ್ 6 (ಕರ್ನಾಟಕ ವಾರ್ತೆ) :**

**ಕರ್ನಾಟಕ ವಿಧಾನ ಮಂಡಲದ ಸ್ಥಳೀಯ ಸಂಸ್ಥೆಗಳ ಮತ್ತು ಪಂಚಾಯತ್ ರಾಜ್ ಸಂಸ್ಥೆಗಳ ಸಮಿತಿಯು ಭಾರತದ ಲೆಕ್ಕ ನಿಯಂತ್ರಕರು ಮತ್ತು ಮಹಾಲೆಕ್ಕ ಪರಿಶೋಧಕರು 2016 ಮತ್ತು 2017 ನೇ ಸಾಲಿನಲ್ಲಿ ನೀಡಿರುವ ಪ್ರತ್ಯೇಕ ವರದಿಗಳಲ್ಲಿನ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆಗೆ ಸಂಬಂಧಿತ ಆಡಿಟ್ ಆಕ್ಷೇಪಣೆಗಳನ್ನು ಪರಿಶೀಲಿಸಿ ಸೂಕ್ತ ಶಿಫಾರಸ್ಸುಗಳನ್ನು ಒಳಗೊಂಡ ವರದಿಗಳನ್ನು ಸಿದ್ದಪಡಿಸಿ ಇಂದು ಸಭಾಧ್ಯಕ್ಷರಿಗೆ ಸಲ್ಲಿಸಿದೆ. ಸಮಿತಿಯ ಅಧ್ಯಕ್ಷರಾದ ಅರಗ ಜ್ಞಾನೇಂದ್ರ ಅವರು ಸಮಿತಿಯ 32 ನೇ ವರದಿಯನ್ನು ಸಭಾಧ್ಯಕ್ಷರಿಗೆ ಒಪ್ಪಿಸಿರುತ್ತಾರೆ. ಸಮಿತಿಯ ಸದಸ್ಯರು ಹಾಗೂ ವಿಧಾನ ಸಭೆ ಕಾರ್ಯದರ್ಶಿಯವರು ಮತ್ತು ಜಂಟಿ ಕಾರ್ಯದರ್ಶಿಯವರು ಈ ಸಮಯದಲ್ಲಿ ಉಪಸ್ಥಿತರಿದ್ದರು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.**